**Akashvani : Bangalore**
**National Bulletin In Kannada**
**23.10.2024 / 7.35 am**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**23.10.2024 / 7.35 am**

<><*<><>*><>

**ಮುಖ್ಯಾಂಶಗಳು**

೧. ರಷ್ಯಾದ ಕಜಾನ್‌ನಲ್ಲಿ ಬ್ರಿಕ್ಸ್ ಶೃಂಗಸಭೆಯ ನೇಪಥ್ಯದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಇಂದು ದ್ವಿಪಕ್ಷೀಯ ಮಾತುಕತೆ

೨. ಕೇರಳದ ವಯನಾಡ್ ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ ಇಂದು ನಾಮಪತ್ರ ಸಲ್ಲಿಕೆ

೩. ಕಿತ್ತೂರು ಚನ್ನಮ್ಮನ ವಿಜಯೋತ್ಸವದ ೨೦೦ನೇ ವರ್ಷಾಚರಣೆ ಹಿನ್ನೆಲೆಯಲ್ಲಿ ಇಂದಿನಿಂದ ಮೂರು ದಿನಗಳ ಕಾಲ ಅದ್ದೂರಿ ಕಿತ್ತೂರು ಉತ್ಸವ

೪. ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಹಾಕಿ, ಬ್ಯಾಡ್ಮಿಂಟನ್, ಕುಸ್ತಿ, ಕ್ರಿಕೆಟ್, ಸ್ಕ್ವಾಷ್ ಸೇರಿದಂತೆ ಕೆಲವು ಕ್ರೀಡೆಗಳನ್ನು ತೆಗೆದುಹಾಕಲು ೨೦೨೬ರ ಕಾಮನ್‌ವೆಲ್ತ್ ಕ್ರೀಡಾಕೂಟದ ಸಂಘಟಕ ನಿರ್ಧಾರ

<><*<><>*><>

ರಷ್ಯಾದ ಕಜಾನ್‌ನಲ್ಲಿ ನಡೆಯಲಿರುವ ಬ್ರಿಕ್ಸ್ ಶೃಂಗಸಭೆಯ ನೇಪಥ್ಯದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ವಾಸ್ತವಿಕ ನಿಯಂತ್ರಣ ರೇಖೆಯ ಉದ್ದಕ್ಕೂ ಇರುವ ಪ್ರದೇಶಗಳಲ್ಲಿ ಗಸ್ತು ವ್ಯವಸ್ಥೆಗಳ ಕುರಿತು ಉಭಯ ದೇಶಗಳು ಒಪ್ಪಂದಕ್ಕೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಸಭೆಯು ಭಾರಿ ಮಹತ್ವವನ್ನು ಪಡೆದುಕೊಂಡಿದೆ. ಪ್ರಧಾನಿ ಮೋದಿ ಮತ್ತು ಚೀನಾ ಅಧ್ಯಕ್ಷರ ನಡುವಿನ ಸಭೆಯು ಕಳೆದ ಐದು ವರ್ಷಗಳಲ್ಲಿ ಮೊದಲ ರಚನಾತ್ಮಕ ಸಭೆಯಾಗಿದೆ. ಮೋದಿ ಅವರು ಬ್ರಿಕ್ಸ್ ಅಧಿವೇಶನಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಇದೇ ವೇಳೆ ರಷ್ಯಾ ಮತ್ತು ಇರಾನ್ ಅಧ್ಯಕ್ಷರೊಂದಿಗೆ ಪ್ರಧಾನಿ ಮೋದಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಜಾಗತಿಕ ಸಮಸ್ಯೆಗಳ ಶಾಂತಿಯುತ ಪರಿಹಾರದ

ಅಗತ್ಯದ ಬಗ್ಗೆ ತಿಳಿಸಿದ ಪ್ರಧಾನಿ ಮೋದಿ, ಯುದ್ಧವು ಪರಿಹಾರಗಳನ್ನು ತರುವುದಿಲ್ಲ. ಈ ನಿಟ್ಟಿನಲ್ಲಿ ಶಾಂತಿ ಮಾತುಕತೆಯ ಮೂಲಕ ಸಮಸ್ಯೆ ಇತ್ಯರ್ಥಕ್ಕೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು. ವ್ಲಾದಿಮಿರ್ ಪುಟಿನ್ ಅವರೊಂದಿಗೆ ಚರ್ಚೆ ನಡೆಸಿದ ಮೋದಿ, ರಷ್ಯಾ - ಉಕ್ರೇನ್ ಸಂಘರ್ಷಕ್ಕೆ ಶಾಂತಿಯುತ ಪರಿಹಾರವನ್ನು ತರಲು ಸಹಾಯ ಮಾಡಲು ಭಾರತವು ಸಿದ್ಧವಾಗಿದೆ ಎಂದು ಪ್ರತಿಪಾದಿಸಿದರು.

ಉಕ್ರೇನ್ ನಾಯಕರೊಂದಿಗೆ ಚರ್ಚೆ ನಡೆಸಿ ಈ ಪ್ರದೇಶದಲ್ಲಿ ಶಾಂತಿಯನ್ನು ತರಲು ಭಾರತವು ಕೊಡುಗೆ ನೀಡಲು ಸಿದ್ಧವಾಗಿದೆ ಎಂದು ಪ್ರಧಾನಿ ಮೋದಿ ಮನವರಿಕೆ ಮಾಡಿದ್ದಾರೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಮಾಧ್ಯಮಗಳಿಗೆ ತಿಳಿಸಿದರು. ಮೋದಿ ಮತ್ತು ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಅವರು ಬ್ರಿಕ್ಸ್ ಶೃಂಗಸಭೆಯ ಸಂದರ್ಭದಲ್ಲಿ ಭೇಟಿಗಿ ಮಾತುಕತೆ ನಡೆಸಿದರು. ಹೆಚ್ಚುತ್ತಿರುವ ಸಂಘರ್ಷದ ಬಗ್ಗೆ ಮೋದಿ ತಮ್ಮ ಕಳವಳವನ್ನು ವ್ಯಕ್ತಪಡಿಸಿದ್ದಾರೆ. ಮತ್ತು ನಾಗರಿಕರ ರಕ್ಷಣೆಗಾಗಿ ಕರೆ ನೀಡಿದರು. ಉದ್ವಿಗ್ನತೆಯನ್ನು ಕಡಿಮೆ ಮಾಡಲು ಮಾತುಕತೆ ಮತ್ತು ರಾಜತಾಂತ್ರಿಕತೆಯ ಅಗತ್ಯವಿದೆ ಎಂದು ಮೋದಿ ಒತ್ತಾಯಿಸಿದರು ಎಂದು ವಿಕ್ರಮ್ ಮಿಸ್ರಿ ತಿಳಿಸಿದರು. ಇದೇ ವೇಳೆ ಉಭಯ ನಾಯಕರು ಅಫ್ಘಾನಿಸ್ತಾನದ ಕುರಿತು ಚರ್ಚೆ ನಡೆಸಿದರು ಮತ್ತು ಅಫ್ಘಾನಿಸ್ತಾನದ ಜನರಿಗೆ ಮಾನವೀಯ ನೆರವು ಮುಂದುವರೆಸುವುದರ ಜೊತೆಗೆ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಕಾಪಾಡಿಕೊಳ್ಳುವ ಮಹತ್ವವನ್ನು ಒತ್ತಿಹೇಳಿದರು ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ತಿಳಿಸಿದರು. ಚಬಹಾರ್ ಬಂದರು ಮತ್ತು ಅಂತರಾಷ್ಟ್ರೀಯ ಉತ್ತರ-ದಕ್ಷಿಣ ಸಾರಿಗೆ ಕಾರಿಡಾರ್ ಸೇರಿದಂತೆ ಸಹಕಾರದ ಪ್ರಮುಖ ಕ್ಷೇತ್ರಗಳ ಕುರಿತು ಉಭಯ ನಾಯಕರು ಚರ್ಚೆ ನಡೆಸಿದರು ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಹೇಳಿದ್ದಾರೆ.

<><*<><>*><>

ಪೂರ್ವ ಲಡಾಖ್‌ನಲ್ಲಿ ಉಭಯ ಸೇನೆಗಳ ನಡುವಿನ ಬಿಕ್ಕಟ್ಟನ್ನು ಕೊನೆಗೊಳಿಸಲು ಭಾರತದೊಂದಿಗೆ ಒಪ್ಪಂದ ಮಾಡಿಕೊಂಡಿರುವುದಾಗಿ ಚೀನಾ ದೃಢಪಡಿಸಿದೆ."ಇತ್ತೀಚಿನ ಅವಧಿಯಲ್ಲಿ, ಚೀನಾ ಮತ್ತು ಭಾರತ ಗಡಿಗೆ ಸಂಬಂಧಿಸಿದ ವಿಷಯಗಳ ಕುರಿತು ರಾಜತಾಂತ್ರಿಕ ಮತ್ತು

ಮಿಲಿಟರಿ ವೇದಿಕೆಗಳ ಮೂಲಕ ನಿಕಟ ಸಂವಹನ ನಡೆಸುತ್ತಿದೆ" ಎಂದು ಚೀನಾದ ವಿದೇಶಾಂಗ ಸಚಿವಾಲಯದ ವಕ್ತಾರ ಲಿನ್ ಜಿಯಾನ್ ತಿಳಿಸಿದರು. ೪ ವರ್ಷಗಳ ಸುದೀರ್ಘ ಮಿಲಿಟರಿ ಬಿಕ್ಕಟ್ಟನ್ನು ಕೊನೆಗೊಳಿಸಲು ಒಪ್ಪಂದವನ್ನು ತಲುಪಿರುವ ಕುರಿತು ಭಾರತದ ಹೇಳಿಕೆಯ ಬಗ್ಗೆ ಕೇಳಿದ ಪ್ರಶ್ನೆಗೆ ಲಿನ್ ಪ್ರತಿಕ್ರಿಯೆ ನೀಡಿದ್ದು, ಒಪ್ಪಂದವನ್ನು ದೃಢಪಡಿಸಿದ್ದು, ಈಗ, ಉಭಯ ದೇಶಗಳು 'ಸಂಬಂಧಿತ ವಿಷಯಗಳ' ಕುರಿತು ನಿರ್ಣಯವನ್ನು ತಲುಪಿವೆ ಎಂದು ಹೇಳಿದ್ದಾರೆ. ಇದನ್ನು ಕಾರ್ಯಗತಗೊಳಿಸಲು ಚೀನಾ ಭಾರತದೊಂದಿಗೆ ಕೆಲಸ ಮಾಡುತ್ತದೆ ಎಂದಷ್ಟೇ ಹೇಳಿರುವ ಅವರು ಹೆಚ್ಚಿನ ವಿವರಗಳನ್ನು ನೀಡಲು ನಿರಾಕರಿಸಿದ್ದಾರೆ. ಪೂರ್ವ ಲಡಾಖ್‌ನಲ್ಲಿನ ನೈಜ ನಿಯಂತ್ರಣ ರೇಖೆಯ (ಎಲ್‌ಎಸಿ) ಉದ್ದಕ್ಕೂ ಗಸ್ತು ತಿರುಗಲು ಚೀನಾದೊಂದಿಗೆ ಒಪ್ಪಂದ ಮಾಡಿಕೊಂಡಿರುವುದಾಗಿ ಭಾರತ ಘೋಷಿಸಿತ್ತು. ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ರಷ್ಯಾದ ಕಜಾನ್‌ನಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಗೆ ತೆರಳಿದ ಬೆನ್ನಲ್ಲೇ, ಭಾರತದೊಂದಿಗಿನ ಒಪ್ಪಂದದ ಬಗ್ಗೆ ಚೀನಾದಿಂದ ದೃಢೀಕರಣ ಬಂದಿದೆ. ಪ್ರಧಾನಿ ಮೋದಿ-ಕ್ಸಿ ಜಿನ್‌ಪಿಂಗ್ ನಡುವಿನ ದ್ವಿಪಕ್ಷೀಯ ಸಭೆಯ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಲಿನ್, "ನೀವು ಪ್ರಸ್ತಾಪಿಸಿದ ದ್ವಿಪಕ್ಷೀಯ ಸಭೆಯಲ್ಲಿ, ಏನಾದರೂ ಬೆಳವಣಿಗೆಯಾದಲ್ಲಿ ಚೀನಾ ಸಮಯೋಚಿತ ಮಾಹಿತಿಯನ್ನು ಬಿಡುಗಡೆ ಮಾಡುತ್ತದೆ" ಎಂದು ಚೀನಾದ ವಿದೇಶಾಂಗ ಸಚಿವಾಲಯದ ವಕ್ತಾರ ಲಿನ್ ಜಿಯಾನ್ ಹೇಳಿದ್ದಾರೆ. ಜೂನ್ ೨೦೨೦ ರಲ್ಲಿ ಗಾಲ್ವಾನ್ ಕಣಿವೆಯಲ್ಲಿ ನಡೆದ ಭೀಕರ ಘರ್ಷಣೆಯ ನಂತರ ಏಷ್ಯಾದ ೨ ದೈತ್ಯ ರಾಷ್ಟ್ರಗಳ ನಡುವಿನ ಸಂಬಂಧಗಳು ಹದಗೆಟ್ಟಿತ್ತು. ಇದು ದಶಕಗಳಲ್ಲಿ ಉಭಯ ರಾಷ್ಟ್ರಗಳ ನಡುವಿನ ಅತ್ಯಂತ ಗಂಭೀರವಾದ ಮಿಲಿಟರಿ ಸಂಘರ್ಷಕ್ಕೂ ಕಾರಣವಾಗಿತ್ತು.

<><*<><>*><>

ಕೇರಳದ ವಯನಾಡು ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ ಇಂದು ನಾಮಪತ್ರ ಸಲ್ಲಿಕೆ ಮಾಡಲಿದ್ದಾರೆ. ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ನಿನ್ನೆ ಮೈಸೂರಿಗೆ ಆಗಮಿಸಿದ್ದು, ಇಂದು ಬೆಳಗ್ಗೆ ವಯನಾಡಿನಲ್ಲಿ ರೋಡ್ ಶೋ ಮೂಲಕ ತೆರಳಿ ನಾಮಪತ್ರ ಸಲ್ಲಿಸಲಿದ್ದಾರೆ. ಮೈಸೂರು ವಿಮಾನ ನಿಲ್ದಾಣಕ್ಕೆ ಆಗಮಿಸಿದ ಸೋನಿಯಾ ಗಾಂಧಿ ಮತ್ತು ಪ್ರಿಯಾಂಕಾ ಅವರನ್ನು ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ, ಕೆಪಿಸಿಸಿ

ಅಧ್ಯಕ್ಷ ಡಿ.ಕೆ. ಶಿವಕುಮಾರ್ ಸ್ವಾಗತ ಕೋರಿದರು. ಇಂದು ಬೆಳಿಗ್ಗೆ ೧೧ ಗಂಟೆಗೆ ಕೇರಳದ ಕಲ್ಪೆಟ್ಟಾದ ಹೊಸ ಬಸ್ ನಿಲ್ದಾಣದಿಂದ ರೋಡ್‌ಶೋ ಆಯೋಜಿಸಿದೆ. ೧೧.೪೫ ಕ್ಕೆ, ಪ್ರಿಯಾಂಕಾ ಗಾಂಧಿ ಕಲ್ಪೆಟ್ಟಾದ ಕೆಡಬ್ಲ್ಯುಎ ಕಚೇರಿ ಎದುರು ಗುಡಲೈನಲ್ಲಿ ಸಾರ್ವಜನಿಕ ಭಾಷಣ ಮಾಡಲಿದ್ದಾರೆ.ಮಧ್ಯಾಹ್ನ ೧೨.೩೦ಕ್ಕೆ ಪ್ರಿಯಾಂಕಾ ಗಾಂಧಿ ಅವರು ಕಲ್ಪೆಟ್ಟಾ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಲಿದ್ದಾರೆ. ನಾಮಪತ್ರ ಸಲ್ಲಿಕೆ ವೇಳೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪಕ್ಷದ ಮಾಜಿ ಮುಖ್ಯಸ್ಥರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಉಪಸ್ಥಿತರಿರಲಿದ್ದಾರೆ. ಸಾರ್ವಜನಿಕ ಕಾರ್ಯಕ್ರಮದಲ್ಲಿ ತಮ್ಮೊಂದಿಗೆ ಸೇರುವಂತೆ ಜನತೆಗೆ ಕರೆ ನೀಡಿರುವ ರಾಹುಲ್ ಗಾಂಧಿ, "ಒಟ್ಟಾಗಿ, ವಯನಾಡು ಅನ್ನು ಪ್ರೀತಿಯಿಂದ ಪ್ರತಿನಿಧಿಸುವುದನ್ನು ಖಚಿತಪಡಿಸಿಕೊಳ್ಳೋಣ" ಎಂದು ಸಾಮಾಜಿಕ ಜಾಲತಾಣದಲ್ಲಿ ಸಂದೇಶ ನೀಡಿದ್ದಾರೆ.

<><*<><>*><>

ಬ್ರಿಟಿಷರ ವಿರುದ್ಧ ಸ್ವಾತಂತ್ರ್ಯ ಕಹಳೆ ಮೊಳಗಿಸಿ, ಹೋರಾಟದ ವೀರತ್ವ ಮೆರೆದು ೧೮೨೪ರಲ್ಲಿ ಬ್ರಿಟಿಷ್ ಅಧಿಕಾರಿ ಥ್ಯಾಕರೆಯನ್ನು ಹತ್ಯೆ ಮಾಡಿದ ಐತಿಹಾಸಿಕ ಘಟನೆಗೆ ಇಂದು ಇನ್ನೂರು ವರ್ಷ ತುಂಬಿದೆ. ಚನ್ನಮ್ಮನ ವಿಜಯೋತ್ಸವದ ೨೦೦ನೇ ವರ್ಷಾಚರಣೆ ಹಿನ್ನೆಲೆಯಲ್ಲಿ ಇಂದಿನಿಂದ ಮೂರು ದಿನಗಳ ಕಾಲ ನಡೆಯಲಿರುವ ಅದ್ದೂರಿ ಕಿತ್ತೂರು ಉತ್ಸವಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಇಂದಿನಿಂದ ಇದೇ ೨೫ರವರೆಗೆ ಮೂರು ದಿನಗಳ ಕಾಲ ಜರುಗಲಿರುವ ಕಿತ್ತೂರು ಉತ್ಸವ ಕಾರ್ಯಕ್ರಮದಲ್ಲಿ ರಾಜ್ಯ, ರಾಷ್ಟ್ರ ಮಟ್ಟದ ಕಲಾವಿದರುಗಳು ಭಾಗವಹಿಸಲಿದ್ದು, ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಇಂದು ಬೆಳಿಗ್ಗೆ ವೀರಜ್ಯೋತಿ ಸ್ವಾಗತ, ಧ್ವಜಾರೋಹಣ, ಮೆರವಣಿಗೆ, ವಸ್ತುಪ್ರದರ್ಶನ ಮಳಿಗೆ ಉದ್ಘಾಟನೆ ಮತ್ತಿತರ ಕಾರ್ಯಕ್ರಮಗಳು ಜರುಗಲಿವೆ. ಸಂಜೆ ನಡೆಯುವ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗವಹಿಸುವ ಸಾಧ್ಯತೆಯಿದೆ ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದ್ದಾರೆ.

<><*<><>*><>

ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗುತ್ತಿದ್ದು, ಅಪಾರ ಪ್ರಮಾಣದ ಬೆಳೆ ನಷ್ಟವಾಗಿದೆ. ರಾಜಧಾನಿ ಬೆಂಗಳೂರು

ಸೇರಿದಂತೆ ರಾಜ್ಯದ ಹಲವೆಡೆ ಭಾರಿ ಮಳೆಯಾಗಿದೆ. ಭಾರಿ ಮಳೆ ಮುನ್ಸೂಚನೆ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಇಂದು ಶಾಲೆಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ. ಬೆಂಗಳೂರಿನ ಯಲಹಂಕ ವಲಯ ವ್ಯಾಪ್ತಿಯ ಕೆಲ ಪ್ರದೇಶಗಳಲ್ಲಿ ಧಾರಕಾರ ಮಳೆಯಾಗಿದ್ದು, ಹಲವು ಪ್ರದೇಶಗಳು ಜಲಾವೃತಗೊಂಡಿವೆ. ಬೆಂಗಳೂರು ಹೊರವಲಯದ ಹೆಣ್ಣೂರು ಸಮೀಪ ನಿರ್ಮಾಣ ಹಂತದಲ್ಲಿದ್ದ ಬಹುಮಹಡಿ ಕಟ್ಟಡವೊಂದು ಕುಸಿದು ಬಿದ್ದಿದೆ. ಇದರ ಅವಶೇಷಗಳಡಿ ಕಾರ್ಮಿಕರು ಸಿಲುಕಿದ್ದು, ಹಲವರನ್ನು ರಕ್ಷಿಸಲಾಗಿದೆ. ಘಟನಾ ಸ್ಥಳಕ್ಕೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಯಲಹಂಕ ವಲಯ ವ್ಯಾಪ್ತಿಯಲ್ಲಿ ಮಳೆ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್, ಕೂಡಲೇ ತುರ್ತು ಕ್ರಮಗಳನ್ನು ಕೈಗೊಂಡು ಸಮಸ್ಯೆ ಬಗೆಹರಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಅಧಿಕ ಸಮಸ್ಯೆಯಿರುವ ಕಡೆ ನಿವಾಸಿಗಳನ್ನು ಬೇರೆಡೆ ಸ್ಥಳಾಂತರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ರಾಜಕಾಲುವೆಗಳ ಪ್ರಮುಖ ಸ್ಥಳಗಳಲ್ಲಿ ಜೆಸಿಬಿಗಳ ಮೂಲಕ ಮಳೆ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಲು ಸೂಚಿಸಿದರು. ಯಲಹಂಕ ವಲಯ ವ್ಯಾಪ್ತಿಯಲ್ಲಿ ಭಾರೀ ಮಳೆಯಾಗಿರುವ ಕಾರಣ ಹೆಚ್ಚುವರಿ ಮೇಲ್ವಿಚಾರಣೆಗಾಗಿ ಪಾಲಿಕೆ ಇತರೆ ವಲಯಗಳ ಐ.ಎ.ಎಸ್, ಕೆ.ಎ.ಎಸ್ ಅಧಿಕಾರಿಗಳನ್ನು ನಿಯೋಜನೆ ಮಾಡಲಾಗಿದೆ.  ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಗುಡುಗು ಸಹಿತ ಭಾರಿ ಮಳೆಯಾಗುತ್ತಿದ್ದು ಜನರು ಎಚ್ಚರಿಕೆಯಿಂದ ಇರುವಂತೆ ಜಿಲ್ಲಾಡಳಿತ ಮನವಿ ಮಾಡಿದೆ. ನದಿಗಳಲ್ಲಿ ನೀರಿನ ಪ್ರಮಾಣ ಹೆಚ್ಚಾಗಿದ್ದು, ಜನರು ನದಿಗೆ ಇಳಿಯದಂತೆ ಸೂಚನೆ ನೀಡಲಾಗಿದೆ. ಜಿಲ್ಲೆಯ ಪ್ರವಾಸಿ-ತಾಣಗಳಿಗೆ ಭೇಟಿ ನೀಡುವ ಪ್ರವಾಸಿಗರಿಗೆ ಮುಂದಿನ ಒಂದು ವಾರ ಪ್ರವಾಸ ಮುಂದೂಡುವಂತೆ ಸೂಚಿಸಲಾಗಿದೆ. ಹೆಚ್ಚು ಮಳೆಯಿಂದಾಗಿ ಕಾಫಿ, ಅಡಿಕೆ, ಕಾಳು ಮೆಣಸು ಬೆಳೆಗಳಿಗೆ ಸಮಸ್ಯೆ ಉಂಟಾಗಿದೆ.  ಹಾವೇರಿ ಜಿಲ್ಲೆಯಾದ್ಯಂತ ಮಳೆ ಮುಂದುವರಿದಿದ್ದು, ಪ್ರವಾಹ ಪರಿಸ್ಥಿತಿ ನಿರ್ಮಾಣವಾಗಿದೆ. ಮಳೆಯಿಂದ ಜಿಲ್ಲೆಯಲ್ಲಿ ನೂರಾರು ಮನೆಗಳಿಗೆ ನೀರು ನುಗಿದೆ. ಹಲವು ಗ್ರಾಮಗಳ ನಡುವಿನ ರಸ್ತೆಗಳ ಮೇಲೆ ನೀರು ಹರಿಯುತ್ತಿದೆ. ದಾವಣಗೆರೆ ಜಿಲ್ಲೆಯಾದ್ಯಂತ ವರ್ಷಧಾರೆ ಮುಂದುವರಿದಿದ್ದು, ಸಾರ್ವಜನಿಕ ಆಸ್ತಿ ಪಾಸ್ತಿಗೆ ಸಾಕಷ್ಟು ಹಾನಿ

ಸಂಭವಿಸಿದೆ. ಈ ನಡುವೆ ಮುಂದಿನ ಎರಡು ದಿನಗಳಲ್ಲಿ ಒಡಿಶಾ, ಕೇರಳ, ಮಾಹೆ, ಕರಾವಳಿ ಮತ್ತು ಕರ್ನಾಟಕದ ದಕ್ಷಿಣ ಒಳನಾಡಿನಲ್ಲಿ, ಕಡಲ ತೀರದಲ್ಲಿ ಭಾರೀ ಮಳೆಯಾಗಲಿದೆ. ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್‌ನಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<><>*><>

ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಹಾಕಿ, ಬ್ಯಾಡ್ಮಿಂಟನ್, ಕುಸ್ತಿ, ಕ್ರಿಕೆಟ್, ಸ್ಕ್ವಾಷ್ ಸೇರಿದಂತೆ ಕೆಲವು ಕ್ರೀಡೆಗಳನ್ನು ತೆಗೆದುಹಾಕಲಾಗುವುದು ಎಂದು ೨೦೨೬ರ ಕಾಮನ್‌ವೆಲ್ತ್ ಕ್ರೀಡಾಕೂಟದ ಸಂಘಟಕರು ತಿಳಿಸಿದ್ದಾರೆ. ಹಾಕಿ, ಬ್ಯಾಡ್ಮಿಂಟನ್, ಕುಸ್ತಿ, ಕ್ರಿಕೆಟ್, ಸ್ಕ್ವಾಷ್ ಮತ್ತು ಶೂಟಿಂಗ್‌ನಂತಹ ಹಲವಾರು ಪ್ರಮುಖ ಕ್ರೀಡೆಗಳನ್ನು ಈವೆಂಟ್‌ನಿಂದ ತೆಗೆದುಹಾಕಲು ನಿರ್ಧರಿಸಲಾಗಿದೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಕ್ರೀಡಾಕೂಟದ ಮುಂದಿನ ಆವೃತ್ತಿಯು ಕೇವಲ ೧೦ ಕ್ರೀಡೆಗಳನ್ನು ಒಳಗೊಂಡಿರುತ್ತದೆ. ಈವೆಂಟ್ ಬಹು-ಕ್ರೀಡಾ ಭಾವನೆಯನ್ನು ಹೊಂದಿದೆ ಮತ್ತು ಆರ್ಥಿಕ ಮತ್ತು ಕಾರ್ಯಾಚರಣೆಯ ಅಪಾಯವನ್ನು ನಿರ್ವಹಿಸುವ ಅಗತ್ಯತೆಯ ನಡುವೆ ಸಮತೋಲನವನ್ನು ಸಾಧಿಸುತ್ತದೆ ಎಂದು ಹೇಳಿಕೆಯಲ್ಲಿ ವಿವರಿಸಲಾಗಿದೆ. ಕಾಮನ್‌ವೆಲ್ತ್ ಕ್ರೀಡಾಕೂಟದ ೨೩ ನೇ ಆವೃತ್ತಿಯು ಸ್ಕಾಟ್‌ಲ್ಯಾಂಡ್‌ನ ಗ್ಲಾಸ್ಗೋದಲ್ಲಿ ೨೦೨೬ರ ಜುಲೈ ೨೩ರಿಂದ ಆಗಸ್ಟ್ ೨ ರವರೆಗೆ ನಾಲ್ಕು ಸ್ಥಳಗಳಲ್ಲಿ ನಡೆಯಲಿದೆ. ಭಾರತ ಸೇರಿದಂತೆ ೭೪ ಕಾಮನ್‌ವೆಲ್ತ್ ರಾಷ್ಟ್ರಗಳು ಮತ್ತು ಪ್ರಾಂತ್ಯಗಳಿಂದ ಸುಮಾರು ೩,೦೦೦ ಕ್ರೀಡಾಪಟುಗಳು ಕ್ರೀಡಾಕೂಟದಲ್ಲಿ ಸ್ಪರ್ಧಿಸಲಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>